**National**
**Kannada**
**10.04.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಹಿಂದೂ ಮಹಾಸಾಗರ ಸಮ್ಮೇಳನ; ವಿವಿಧ ದೇಶಗಳ ನಾಯಕರೊಂದಿಗೆ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ

೨. ಇಂಧನ ಪೂರೈಕೆ ಕುರಿತು ಕತಾರ್ ಇಂಧನ ವ್ಯವಹಾರಗಳ ರಾಜ್ಯ ಸಚಿವರೊಂದಿಗೆ ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ಸಭೆ

೩. ಉತ್ತರ ಪ್ರದೇಶದ ಯುಮುನಾ ನದಿಯಲ್ಲಿ ದೋಣಿ ಮಗುಚಿ ಆರು ಮಂದಿ ಸಾವು- ಪ್ರಧಾನಿ ಸಂತಾಪ

೪. ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್; ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್ ಪ್ರವೇಶಿಸಿದ ಆಯುಷ್ ಶೆಟ್ಟಿ

೫. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು- ರಾಜಸ್ಥಾನ ರಾಯಲ್ಸ್ ನಡುವಿನ ಪಂದ್ಯಕ್ಕೆ ಮಳೆ ಅಡ್ಡಿ

**<>><><*><><<>**

ಮಾರಿಷಸ್‌ನ ಪೋರ್ಟ್ ಲೂಯಿಸ್‌ನಲ್ಲಿ ನಡೆದ ೯ನೇ ಹಿಂದೂ ಮಹಾಸಾಗರ ಸಮ್ಮೇಳನದ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಇಂದು ವಿವಿಧ ದೇಶಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು. ಅವರು ಮಾರಿಷಸ್ ಅಧ್ಯಕ್ಷ ಧರಂಬೀರ್ ಗೋಖೂಲ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಬಳಿಕ ಡಾ. ಜೈಶಂಕರ್ ಅವರು ಮಾರಿಷಸ್‌ನ ಮಾಜಿ ಪ್ರಧಾನಿ ಮತ್ತು ಮಿಲಿಟಂಟ್ ಸೋಷಿಯಲಿಸ್ಟ್ ಮೂವ್‌ಮೆಂಟ್ ಪಕ್ಷದ ನಾಯಕ ಪ್ರವಿಂದ್ ಕುಮಾರ್ ಜುಗ್ನೌತ್ ಅವರನ್ನು ಸಹ ಭೇಟಿಯಾದರು. ಸೀಶೆಲ್ಸ್‌ನ ವಿದೇಶಾಂಗ ಸಚಿವ ಬ್ಯಾರಿ ಫೌರ್ ಅವರೊಂದಿಗೆ ಮಾತುಕತೆ ನಡೆಸಿದರು. ಪ್ರಸ್ತುತ ಆರ್ಥಿಕ ಸವಾಲುಗಳನ್ನು ಎದುರಿಸುವಲ್ಲಿ ಸೀಶೆಲ್ಸ್‌ಗೆ ಬೆಂಬಲ ನೀಡಲು ಭಾರತ ಬದ್ಧವಾಗಿದೆ ಎಂದು ಡಾ. ಜೈಶಂಕರ್

ಹೇಳಿದರು. ನಂತರ ಅವರು ಭೂತಾನ್ ವಿದೇಶಾಂಗ ಸಚಿವ ಡಿ.ಎನ್.ಧುಂಗ್ಯೆಲ್ ಅವರೊಂದಿಗೆ ಮಾತುಕತೆ ನಡೆಸಿದರು.

<>><><*><><<>

ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರು ಕತಾರ್‌ನ ಇಂಧನ ವ್ಯವಹಾರಗಳ ರಾಜ್ಯ ಸಚಿವ ಹಾಗೂ 'ಕತಾರ್ ಎನರ್ಜಿ' ಸಂಸ್ಥೆಯ ಸಿಇಒ ಸಾದ್ ಶೇರಿಡಾ ಅಲ್-ಕಾಬಿ ಅವರೊಂದಿಗೆ ದೋಹಾದಲ್ಲಿ ಮಹತ್ವದ ಮಾತುಕತೆ ನಡೆಸಿದರು. ಭಾರತಕ್ಕೆ ವಿಶ್ವಾಸಾರ್ಹ ಇಂಧನ ಪೂರೈಕೆದಾರ ರಾಷ್ಟ್ರವಾಗಿ ಮುಂದುವರಿಯುವುದಾಗಿ ಕತಾರ್ ಈ ಸಂದರ್ಭದಲ್ಲಿ ಪುನರುಚ್ಚರಿಸಿದೆ ಎಂದು ಸಚಿವರು ತಿಳಿಸಿದ್ದಾರೆ. ಸಭೆಯ ಅವಧಿಯಲ್ಲಿ ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಸಂಬಂಧಗಳ ಕುರಿತು ಸುದೀರ್ಘ ಚರ್ಚೆ ನಡೆಸಲಾಯಿತು.

<>><><*><><<>

ಭಾರತದ ಅತ್ಯಧಿಕ ವಾರ್ಷಿಕ ಸೌರ ಸಾಮರ್ಥ್ಯ ಸೇರ್ಪಡೆಯನ್ನು ದಾಖಲಿಸುವಲ್ಲಿನ ಸಾಧನೆಯನ್ನು ಎತ್ತಿ ತೋರಿಸುವ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಹಂಚಿಕೊಂಡಿದ್ದಾರೆ. ಆಕಾಶವಾಣಿ ನ್ಯೂಸ್ ಸುದ್ದಿಯನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ಪ್ರಧಾನಿ, ನವೀಕರಿಸಬಹುದಾದ ಇಂಧನ ವಲಯದಲ್ಲಿ ಸಾಧಿಸಲಾದ ಮಹತ್ವದ ಮೈಲಿಗಲ್ಲಿನ ಬಗ್ಗೆ ವಿವರಿಸಿದರು. ಇದಕ್ಕೂ ಮೊದಲು, ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ೨೦೨೫-೨೬ರ ಹಣಕಾಸು ವರ್ಷದಲ್ಲಿ ಭಾರತ, ತನ್ನ ಅತ್ಯಧಿಕ ವಾರ್ಷಿಕ ಸೌರ ಸಾಮರ್ಥ್ಯ ಸೇರ್ಪಡೆಯನ್ನು ಸುಮಾರು ೪೫ ಗಿಗಾ ವ್ಯಾಟ್‌ಗಳಷ್ಟು ದಾಖಲಿಸಿದೆ ಎಂದು ತಿಳಿಸಿದ್ದಾರೆ. ಈ ಸಾಧನೆಯು ಇಂಧನ ಸುರಕ್ಷತೆ, ಸುಸ್ಥಿರ ಅಭಿವೃದ್ಧಿ ಮತ್ತು ವಿಕಸಿತ ಭಾರತದ ದೃಷ್ಟಿಕೋನಕ್ಕೆ ಭಾರತದ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವರು ಹೇಳಿದ್ದಾರೆ.

<>><><*><><<>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ಜಪಾನ್ ವಿದೇಶಾಂಗ ಸಚಿವ ತೋಶಿಮಿಟ್ಸು ಮೊಟೆಗಿ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಹಾರ್ಮುಜ್ ಜಲಸಂಧಿಯ ಮೂಲಕ ಅಂತಾರಾಷ್ಟ್ರೀಯ ಸಾಗಣೆ ಸೇರಿದಂತೆ ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಸಂಘರ್ಷದಲ್ಲಿ ಮಡಿದ ಭಾರತೀಯರಿಗೆ ಜಪಾನ್ ವಿದೇಶಾಂಗ ಸಚಿವರು ಸಂತಾಪ ಸೂಚಿಸಿದರು.

<>><><*><><<>

ಭಾರತದ ಡಿಜಿಟಲ್ ಪಾವತಿ ವ್ಯವಸ್ಥೆ ಯುನಿಫೈಡ್ ಪೇಮೆಂಟ್ಸ್ ಇಂಟರ್ಫೇಸ್- ಯುಪಿಐ ನಾಳೆಗೆ ಹತ್ತು ವರ್ಷಗಳನ್ನು ಪೂರೈಸಲಿದೆ. ಯುಪಿಐ ವ್ಯವಸ್ಥೆಯು ೨೦೧೬-೧೭ ರ ಆರ್ಥಿಕ ವರ್ಷದಲ್ಲಿ ೬ ಸಾವಿರದ ೯೫೨ ಕೋಟಿ ರೂಪಾಯಿ ಮೌಲ್ಯದ ೧೭.೮೬ ದಶಲಕ್ಷ ವಹಿವಾಟುಗಳಿಂದ ೨೦೨೫-೨೬ ರ ಹಣಕಾಸು ವರ್ಷದಲ್ಲಿ ಸುಮಾರು ೨೮೫ ಲಕ್ಷ ಕೋಟಿ ರೂಪಾಯಿಗಳ ಮೊತ್ತದ ೨೧೮.೯೮ ಶತಕೋಟಿ ವಹಿವಾಟುಗಳಿಗೆ ಏರಿಕೆಯಾಗಿದೆ ಎಂದು ಟ್ರ್ಯಾಕ್ಸನ್ ವರದಿ ಮಾಡಿದೆ. ಒಂದು ತಿಂಗಳ ಯುಪಿಐ ವಹಿವಾಟಿನ ಮೌಲ್ಯ ಸುಮಾರು ೨೮ ಲಕ್ಷ ಕೋಟಿ ರೂಪಾಯಿಗಳಾಗಿದ್ದು, ಇದು ಆರ್ಥಿಕತೆಯ ಒಟ್ಟು ಕರೆನ್ಸಿ ದಾಸ್ತಾನಿನ ಸುಮಾರು ಶೇಕಡಾ ೭೦ ರಷ್ಟಿದೆ. ಇದು ನಗದಿಗೆ ಹೋಲಿಸಿದರೆ ಡಿಜಿಟಲ್ ಪಾವತಿಗಳ ಪ್ರಮಾಣವು ಗಮನಾರ್ಹವಾಗಿ ಏರಿಕೆಯಾಗಿದೆ ಎಂಬುದನ್ನು ಪ್ರತಿಬಿಂಬಿಸುತ್ತದೆ.

<>><><*><><<>

ಉಪರಾಷ್ಟ್ರಪತಿ ಮತ್ತು ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ನೂತನ ನಾಮ ನಿರ್ದೇಶಿತ ಸದಸ್ಯ ಹರಿವಂಶ್ ಅವರಿಗೆ ಪ್ರಮಾಣವಚನ ಬೋಧಿಸಿದರು. ಅವರು, ಹಿಂದಿ ಭಾಷೆಯಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್, ಜೆ.ಪಿ.ನಡ್ಡಾ, ಅರ್ಜುನ್ ರಾಮ್ ಮೇಘ್‌ವಾಲ್, ರಾಮನಾಥ್ ಠಾಕೂರ್ ಸೇರಿದಂತೆ ಹಲವು ಸಚಿವರು ಉಪಸ್ಥಿತರಿದ್ದರು.

<>><><*><><<>

ದೇಶದ ಜಾತಿ ಗಣತಿಯನ್ನು ತಡೆಹಿಡಿಯುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್ ಮಲ್ಯಾ ಬಾಗ್ಚಿ ಮತ್ತು ವಿಪುಲ್ ಎಂ. ಪಾಂಚೋಲಿ ಅವರನ್ನೊಳಗೊಂಡ ಪೀಠ ಈ ಅರ್ಜಿಯನ್ನು ತಿರಸ್ಕರಿಸಿದೆ. ಇದೇ ಅರ್ಜಿಯಲ್ಲಿ ಒಂದೇ ಮಗುವನ್ನು ಹೊಂದಿರುವ ಕುಟುಂಬಗಳಿಗೆ ಆರ್ಥಿಕ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ನೀತಿಗಳನ್ನು ರೂಪಿಸಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕೆಂದು ಕೋರಲಾಗಿತ್ತು. ಈ ಹಿಂದೆ ಫೆಬ್ರವರಿ ೨ ರಂದು ನಡೆದ ವಿಚಾರಣೆಯ ಸಂದರ್ಭದಲ್ಲಿಯೂ ಸಹ ೨೦೨೭ರ ಸಾರ್ವತ್ರಿಕ ಜನಗಣತಿಯಲ್ಲಿ ನಾಗರಿಕರ ಜಾತಿ ದತ್ತಾಂಶವನ್ನು ದಾಖಲಿಸುವ, ವರ್ಗೀಕರಿಸುವ ಮತ್ತು ಪರಿಶೀಲಿಸುವ ಪ್ರಕ್ರಿಯೆಯನ್ನು ಪ್ರಶ್ನಿಸಿ, ಸಲ್ಲಿಸಲಾಗಿದ್ದ ಪ್ರತ್ಯೇಕ

ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಿಚಾರಣೆಗೆ ಎತ್ತಿಕೊಳ್ಳಲು ಸರ್ವೋಚ್ಚ ನ್ಯಾಯಾಲಯ ನಿರಾಕರಿಸಿತ್ತು.

<>><><*><><<>

ಸಾಂಪ್ರದಾಯಿಕ ಈಸ್ಟರ್ ಹಬ್ಬದ ಪ್ರಯುಕ್ತ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ರಷ್ಯಾ-ಉಕ್ರೇನ್ ನಡುವೆ ಕದನ ವಿರಾಮವನ್ನು ಘೋಷಿಸಿದ್ದಾರೆ. ಉಕ್ರೇನ್ ಅಧ್ಯಕ್ಷ ವೊಲೊಡಮಿರ್ ಝೆಲೆನ್ಸ್ಕಿ, ಕದನ ವಿರಾಮ ಘೋಷಣೆಯನ್ನು ಸ್ವಾಗತಿಸಿದ್ದಾರೆ.  ನಾಳೆಯಿಂದ ಎರಡು ದಿನಗಳ ಕಾಲ ಕದನ ವಿರಾಮ ಜಾರಿಯಲ್ಲಿರುತ್ತದೆ ಎಂದು ರಷ್ಯಾದ ಸುದ್ದಿ ಸಂಸ್ಥೆ ವರದಿ ಮಾಡಿದೆ.

<>><><*><><<>

ಕಳೆದ ವಾರ ಅಮೆರಿಕ-ಇಸ್ರೇಲ್ ವೈಮಾನಿಕ ದಾಳಿಯಲ್ಲಿ ಗಾಯಗೊಂಡಿದ್ದ ಇರಾನ್‌ನ ಮಾಜಿ ವಿದೇಶಾಂಗ ಸಚಿವ ಕಮಲ್ ಖರಾಜಿ ನಿನ್ನೆ ರಾತ್ರಿ ನಿಧನರಾಗಿದ್ದಾರೆ ಎಂದು ಇರಾನ್ ಖಚಿತಪಡಿಸಿದೆ. ಕಮಲ್ ಖರಾಜಿ, ಇರಾನ್‌ನ ಮಾಜಿ ಸರ್ವೋಚ್ಚ ನಾಯಕ ದಿವಂಗತ ಅಯತೊಲ್ಲಾ ಅಲಿ ಖಮೇನಿ ಅವರ ವಿದೇಶಾಂಗ ವ್ಯವಹಾರಗಳ ಸಲಹೆಗಾರರಾಗಿ ಕಾರ್ಯ ನಿರ್ವಹಿಸಿದ್ದರು.

<>><><*><><<>

ಉತ್ತರ ಪ್ರದೇಶದ ಮಥುರಾ ಜಿಲ್ಲೆಯ ಯಮುನಾ ನದಿಯಲ್ಲಿ ದೋಣಿ ಮಗುಚಿ ಆರು ಜನರು ಸಾವನ್ನಪ್ಪಿದ್ದಾರೆ. ಲುಧಿಯಾನ ಮೂಲದ ಭಕ್ತರನ್ನು ಕರೆದೊಯ್ಯುತ್ತಿದ್ದ ದೋಣಿ ಇಂದು ಮಧ್ಯಾಹ್ನ ೨.೪೫ ಸುಮಾರಿಗೆ ಯಮುನಾ ನದಿಯಲ್ಲಿ ಮುಳುಗಿದಾಗ ಈ ಘಟನೆ ಸಂಭವಿಸಿದೆ. ಈವರೆಗೆ ಆರು ಮೃತ ದೇಹಗಳನ್ನು ಶವಗಳನ್ನು ಹೊರತೆಗೆಯಲಾಗಿದ್ದು, ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಲುಧಿಯಾನದ ಸುಮಾರು ೩೦ ಜನರು ೨ ದೋಣಿಗಳಲ್ಲಿ ವಿಹಾರ ಮಾಡುತ್ತಿದ್ದರು. ಕೇಸಿ ಘಾಟ್ ಬಳಿ ಈ ಘಟನೆ ಸಂಭವಿಸಿದೆ ಎಂದು ಮಥುರಾ ಜಿಲ್ಲಾಧಿಕಾರಿ ಸಿ.ಪಿ.ಸಿಂಗ್ ತಿಳಿಸಿದ್ದಾರೆ. ದೋಣಿ ದುರಂತಕ್ಕೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

<>><><*><><<>

ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಆಯುಷ್ ಶೆಟ್ಟಿ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಚೀನಾದ ನಿಂಗ್ಬೋದಲ್ಲಿ ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಅವರು ವಿಶ್ವದ ನಾಲ್ಕನೇ ಶ್ರೇಯಾಂಕಿತ ಇಂಡೋನೇಷ್ಯಾದ ಜೊನಾಥನ್ ಕ್ರಿಸ್ಟಿ ಅವರನ್ನು ೨೩-೨೧, ೨೧-೧೭ ಅಂತರದಲ್ಲಿ ಮಣಿಸಿ ಮುಂದಿನ ಹಂತಕ್ಕೆ ಮುನ್ನಡೆದರು.

<>><><*><><<>

ಗುವಾಹಟಿಯ ಬರ್ಸಾಪುರ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳ ಮುಖಾಮುಖಿಯಾಗಲಿವೆ. ಮಳೆಯ ಕಾರಣ ಟಾಸ್ ತಡವಾಗಿದೆ.

<>><><*><><<>

ಮಂಗೋಲಿಯಾದ ಉಲಾನ್‌ಬತಾರ್‌ನಲ್ಲಿ ನಡೆದ ೨೦೨೬ ರ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಇಂದು ಐದು ಚಿನ್ನ, ಮೂರು ಬೆಳ್ಳಿ ಮತ್ತು ಎಂಟು ಕಂಚು ಸೇರಿದಂತೆ ೧೬ ಪದಕಗಳನ್ನು ಗೆದ್ದು, ತನ್ನ ಅಭಿಯಾನವನ್ನು ಕೊನೆಗೊಳಿಸಿತು. ಪುರುಷರ ೫೦ ಕೆಜಿ ವಿಭಾಗದಲ್ಲಿ, ವಿಶ್ವನಾಥ್ ಸುರೇಶ್ ಇಂದು ಚಿನ್ನದ ಪದಕ ವಿಜೇತರಾದರು. ಅವರು ಫೈನಲ್‌ನಲ್ಲಿ ಜಪಾನ್‌ನ ಡೈಚಿ ಇವಾಯ್ ಅವರನ್ನು ೫-೦ ಅಂತರದಿಂದ ಪರಾಭವಗೊಳಿಸಿದರು. ಪುರುಷರ ೬೦ ಕೆಜಿ ವಿಭಾಗದ ಫೈನಲ್‌ನಲ್ಲಿ ಕಝಾಕಿಸ್ತಾನದ ಒರಾಜ್‌ಬೆಕ್ ಅಸಿಲ್ಕುಲೋವ್ ವಿರುದ್ಧ ೨-೩ ಅಂತರದಿಂದ ಸೋತ ನಂತರ ಸಚಿನ್ ಸಿವಾಚ್ ಬೆಳ್ಳಿ ಪದಕ ಗೆದ್ದರು. ಭಾರತೀಯ ಮಹಿಳಾ ಬಾಕ್ಸರ್‌ಗಳು ನಿನ್ನೆ ಐತಿಹಾಸಿಕ ಪ್ರದರ್ಶನ ನೀಡಿ, ನಾಲ್ಕು ಚಿನ್ನ, ಎರಡು ಬೆಳ್ಳಿ ಮತ್ತು ನಾಲ್ಕು ಕಂಚು ಸೇರಿದಂತೆ ಒಟ್ಟು ೧೦ ಪದಕಗಳನ್ನು ಗೆದ್ದರು. ಭಾರತ ಐದು ಚಿನ್ನದೊಂದಿಗೆ ಎರಡನೇ ಸ್ಥಾನ ಗಳಿಸಿತು.

<>><><*><><<>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೯೧೯ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೫೫೦ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೭೬ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೫೧ ಅಂಕಗಳು ದಾಖಲಾಗಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>